# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1205 (1471)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

ವಿಷಯ : ರಾಜ್ಯದಲ್ಲಿನ "ಗಂಗಾ ಕಲ್ಯಾಣ" ಯೋಜನೆ ಕುರಿತು

(ಅ) ಕಳೆದ ಎರಡು ವರ್ಷಗಳಿಂದ ರಾಜ್ಯದ ಬಡ ರೈತರ ಜಮೀನುಗಳಿಗೆ ಉಚಿತವಾಗಿ ಕೊಳವೆ ಬಾವಿ ಕೊರೆಯಿಸುವ "ಗಂಗಾ ಕಲ್ಯಾಣ" ಯೋಜನೆ ಫಲಾನುಭವಿಗಳಿಗೆ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಎರಡು ವರ್ಷಗಳ ಅವಧಿಯಲ್ಲಿ "ಗಂಗಾ ಕಲ್ಯಾಣ" ಯೋಜನೆಯಡಿ ಬಿಡುಗಡೆಗೊಂಡ ಅನುದಾನವೆಷ್ಟು ;

(ಇ) ಕಳೆದ ಎರಡು ವರ್ಷಗಳಲ್ಲಿ ಸದರಿ ಯೋಜನೆಯಡಿ ಕೊರೆಯಿಸಿದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ;

(ಈ) ಕಳೆದ ಎರಡು ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಗೆ ಬಿಡುಗಡೆಗೊಂಡ ಅನುದಾನ ಹಾಗೂ ಕೊರೆಯಲಾದ ಬಾವಿಗಳೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)